# ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.

E-mail:Commissioner.pue@gmail.com. * Ph. No.23361857, 23361858* Fax-2336185_


ಸಂಖ್ಯೆ:ಪಿಯು/ಸಿಬ್ಬಂದಿ-2/ಎನ್ಓಸಿ/ಆರ್‌ಕೆ/2016-17 ದಿನಾಂಕ 30-03-2017.

## ಜ್ಞಾಪನ

**ವಿಷಯ:-** ದಾವಣಗೆರೆ / ಇತರೆ ವಿಶ್ವವಿದ್ಯಾಲಯದಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಅರ್ಜಿ ಸಲ್ಲಿಸಲು ಅನುಮತಿ ನೀಡುವ ಬಗ್ಗೆ.

**ಉಲ್ಲೇಖ:-** ಜಿಲ್ಲಾ ಉಪ ನಿರ್ದೇಶಕರು, ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರು ಹಾಗೂ ಸಿಬ್ಬಂದಿ ವರ್ಗದವರ ಪತ್ರಗಳು.

***

ದಾವಣಗೆರೆ / ಇತರೆ ವಿಶ್ವವಿದ್ಯಾಲಯದಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ನಿರಾಕ್ಷೇಪಣಾ ಪತ್ರ ನೀಡುವಂತೆ ಈ ಕೆಳಕಂಡ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರು ಜಿಲ್ಲಾ ಉಪನಿರ್ದೇಶಕರ / ಪ್ರಾಂಶುಪಾಲರುಗಳ ಮೂಲಕ ಉಲ್ಲೇಖಿತ ಪತ್ರಗಳಲ್ಲಿ ಮನವಿಯನ್ನು ಸಲ್ಲಿಸಿರುತ್ತಾರೆ. ಸದರಿ ಮನವಿಯನ್ನು ಪರಿಶೀಲಿಸಿ, ಈ ಕೆಳಕಂಡ ಉಪನ್ಯಾಸಕರುಗಳು ಸಂಬಂಧಿಸಿದ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಷರತ್ತುಗಳಿಗೆ ಒಳಪಟ್ಟು ಅನುಮತಿ ನೀಡಿದೆ.

| ಕ್ರ.ಸ | ಹೆಸರು ಮತ್ತು ಕಾಲೇಜು ವಿಳಾಸ ಶ್ರೀ/ಶ್ರೀಮತಿ | ಅರ್ಜಿ ಸಲ್ಲಿಸಲು ಅನುಮತಿ ನೀಡಿರುವ ಹುದ್ದೆ |
|---|---|---|
| 1 | ಹರೀಶ್, ಎಚ್. ಎಸ್. ಭೌತಶಾಸ್ತ್ರ ಉಪನ್ಯಾಸಕರು, ಸರ್ಕಾರಿ ಪದವಿ ಪೂರ್ವ ಕಾಲೇಜು, ನವಲಿ, ಗಂಗಾವತಿ ತಾ॥, ಕೊಪ್ಪಳ ಜಿಲ್ಲೆ. | ದಾವಣಗೆರೆ ವಿಶ್ವವಿದ್ಯಾಲಯದಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ |
| 2 | ರಾಘವೇಂದ್ರ, ಡಿ.ಆರ್. ಜೀವಶಾಸ್ತ್ರ ಉಪನ್ಯಾಸಕರು, ಸರ್ಕಾರಿ ಸರ್ಕಾರಿ ಪದವಿ ಪೂರ್ವ ಕಾಲೇಜು, ಗಂಗಾವತಿ, ಕೊಪ್ಪಳ ಜಿಲ್ಲೆ. | ದಾವಣಗೆರೆ ವಿಶ್ವವಿದ್ಯಾಲಯದಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ |
| 3 | ಸೋಮಕ್ಕ, ಎಂ. ಕನ್ನಡ ಭಾಷಾ ಉಪನ್ಯಾಸಕರು, ಸರ್ಕಾರಿ ಪದವಿ ಪೂರ್ವ ಕಾಲೇಜು, ಗಂಗಾವತಿ ಕೊಪ್ಪಳ ಜಿಲ್ಲೆ. | ದಾವಣಗೆರೆ ವಿಶ್ವವಿದ್ಯಾಲಯದಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ |
| 4 | ಡಾ. ಸೀಮಾ ಗ್ರಾಮೋಪಾಧ್ಯೆ ಗಣಿತ ಉಪನ್ಯಾಸಕರು, ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು, ಕೊಪ್ಪಳ ಜಿಲ್ಲೆ, ಕೊಪ್ಪಳ. | ದಾವಣಗೆರೆ ವಿಶ್ವವಿದ್ಯಾಲಯದಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ |
| 5. | ಡಾ. ಜೆ. ಮೋಹನ್ ರಾಜ್ಯಶಾಸ್ತ್ರ ಉಪನ್ಯಾಸಕರು, ಸರ್ಕಾರಿ ಪದವಿ ಪೂರ್ವ ಕಾಲೇಜು, ಅನ್ನೇಹಾಳ್, ಜಂಪಣ್ಣನಹಟ್ಟಿ, ಚಿತ್ರದುರ್ಗ ತಾಲ್ಲೂಕು ಮತ್ತು ಜಿಲ್ಲೆ. | ದಾವಣಗೆರೆ ವಿಶ್ವವಿದ್ಯಾಲಯದಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ |
| 6. | ಡಾ. ಬಿ.ಎಂ ಗುರುನಾಥ್ ಕನ್ನಡ ಭಾಷಾ ಉಪನ್ಯಾಸಕರು, ಸರ್ಕಾರಿ ಪದವಿ ಪೂರ್ವ ಕಾಲೇಜು, ಅನ್ನೇಹಾಳ್, ಜಂಪಣ್ಣನಹಟ್ಟಿ, ಚಿತ್ರದುರ್ಗ ತಾಲ್ಲೂಕು ಮತ್ತು ಜಿಲ್ಲೆ. | ದಾವಣಗೆರೆ ವಿಶ್ವವಿದ್ಯಾಲಯದಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ |
| 7. | ಮಾಲತೇಶ, ಜಿ.ಎನ್. ದ್ವಿತೀಯ ದರ್ಜೆ ಸಹಾಯಕರು ಸರ್ಕಾರಿ ಪದವಿ ಪೂರ್ವ ಕಾಲೇಜು, ಆನಂದಪುರಂ, ಸಾಗರ ತಾ॥ ಶಿವಮೊಗ್ಗ ಜಿಲ್ಲೆ. | ದಾವಣಗೆರೆ ಮತ್ತು ಕುವೆಂಪು ವಿಶ್ವವಿದ್ಯಾಲಯದಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ |

ಷರತ್ತುಗಳು:

1. ಸದರಿ ಸಿಬ್ಬಂದಿಗಳು, ಪರೀಕ್ಷೆಗೆ ಸಂಬಂಧಿಸಿದಂತೆ ಅಧ್ಯಯನವನ್ನು ತಮ್ಮ ಸ್ವಂತ ಖರ್ಚಿನಲ್ಲಿ ಕೈಗೊಳ್ಳತಕ್ಕದ್ದು.

..2

2. ಸಿಬ್ಬಂದಿಗಳು, ಸದರಿ ಪರೀಕ್ಷೆಯ ಅಧ್ಯಯನದ ನಿಮಿತ್ತ ಸರ್ಕಾರ/ಇಲಾಖೆಗೆ ಯಾವುದೇ ಆರ್ಥಿಕ ಹೊರೆ ಉಂಟಾಗತಕ್ಕದ್ದಲ್ಲ.
3. ಸದರಿ ಸಿಬ್ಬಂದಿಗಳು/ಉಪನ್ಯಾಸಕರುಗಳು, ವಿದ್ಯಾರ್ಥಿಗಳ ಪಾಠ-ಪ್ರವಚನಗಳಿಗೆ ತೊಂದರೆ ಉಂಟಾಗದಂತೆ ಬಿಡುವಿನ ವೇಳೆಯಲ್ಲಿ, ಪರೀಕ್ಷೆಯ ಅಧ್ಯಯನಕ್ಕೆ ಬೇಕಾದ ಸಿದ್ಧತೆ ಮಾಡಿಕೊಳ್ಳತಕ್ಕದ್ದು.
4. ಸದರಿ ಸಿಬ್ಬಂದಿಗಳು ಸದರಿ ಪರೀಕ್ಷೆಯ ಅಧ್ಯಯನದ ನಿಮಿತ್ತ ವರ್ಗಾವಣೆ ಕೋರುವಂತಿಲ್ಲ ಅಥವಾ ಅವರ ಪರೀಕ್ಷೆಯ ಅಧ್ಯಯನ ಸರ್ಕಾರದ/ಇಲಾಖೆಯ ವರ್ಗಾವಣೆಗೆ ಅಡ್ಡಿ ಬರುವಂತಿಲ್ಲ.
5. ಸದರಿ ಸಿಬ್ಬಂದಿಗಳು /ಉಪನ್ಯಾಸಕರುಗಳು ಬೇರೆ ಯಾವುದೇ ಇಲಾಖೆಯ ಹುದ್ದೆಗೆ ಆಯ್ಕೆಯಾದಲ್ಲಿ, ಈಗ ಕಾರ್ಯ ನಿರ್ವಹಿಸುತ್ತಿರುವ ಉಪನ್ಯಾಸಕರ ಹುದ್ದೆಯಿಂದ ಬಿಡುಗಡೆ ಹೊಂದುವ ಮೊದಲು ಇಲಾಖೆಯ ಅನುಮತಿ ಪಡೆಯತಕ್ಕದ್ದು.

30.3.17

ಜಂಟಿ ನಿರ್ದೇಶಕರು(ಆಡಳಿತ),
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳು:

1. ಸಂಬಂಧಪಟ್ಟ ಜಿಲ್ಲಾ ಉಪ ನಿರ್ದೇಶಕರಿಗೆ.
2. ಸಹಾಯಕ ನಿರ್ದೇಶಕರು, ಇ-ಆಡಳಿತ, ಪಪೂಶಿಇ, ಬೆಂಗಳೂರು- ಅಂತರ್ಜಾಲದಲ್ಲಿ ಅಳವಡಿಸಲು.
3. ಸಂಬಂಧಿಸಿದ ಉಪನ್ಯಾಸಕರಿಗೆ ಪ್ರಾಂಶುಪಾಲರ ಮೂಲಕ
4. ಕಛೇರಿ ಪ್ರತಿ.